ಮೈಸೂರ ಗೆಜಿಟ್.

ಸರ್ಕಾರದಿಂದ ಪ್ರಾಯಿಷ್ ಆದ್ದು.

ಬೆಂಗಳೂರು, ಶನಿವಾರ ಮೇ ತಾ|| 24, ಸ್ಯ 1890.

ಈ ಭಾಗವನ್ನು ಪ್ರತ್ಯೇಕ ಕೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ.

ಇಂಡ್ಯಗವರ್ನ್‌ಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್‌ರು, ವಗೈರೇರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಮೈಸೂರು ಚೀಫ್ ಕೋರ್ಟ್‌ನಲ್ಲಿ.

ಪರೀಕ್ಷೆ.

ತಾರೀಖು 8ನೇ ಮೇ 1890.

1890ನೇ ಇಸವಿ ಜನವರಿ 11ನೇ ಮಕ್ಕಂ ಮೈಸೂರು ಗೆಜೆಟ್ 2ನೇ ಭಾಗದ 1ನೇ ಪುಟದಲ್ಲಿ ಪ್ರಕಟಿಸಲ್ಪಟ್ಟಿರುವ 1889ನೇ ಇಸವಿ ಡಿಶಂಬರು 14ನೇ ಮಕ್ಕಂ ಇಸ್ತಿಹಾರ್‌ನಾಮೆಯನ್ನು ಬದಲಾಯಿಸಿ ಇದರ ಮೂಲಕ ಪ್ರಕಟಿಸುವದೇನಂದರೆ:— ಇನ್‌ಫ್ಲುಯೆಂಜಾ ಎಂಬ ವಿಷ ಜ್ವರವು ಪ್ರಚುರವಾಗಿರುವದರಿಂದ ಮೈಸೂರು ಲೋಕಲ್ ಸರ್ವಿಸ್ ಮತ್ತು ಫ್ರೀಡರುಗಳ ಪರೀಕ್ಷೆಗಳು 1890ನೇ ಇಸವಿ ಆಗಸ್ಟು 11ನೇ ತಾರೀಖು ಮತ್ತು ಆ ಲಾಗಾಯತು ಮುಂದೆ ಬರುವ ತಾರೀಖುಗಳಿಗೆ ನಿಲ್ಲಿಸಲ್ಪಟ್ಟಿರುತ್ತವೆ.

ಕೋರ್ಟ್‌ನಿಂದ,
ಎಸ್. ಆರ್. ಸುಬ್ಬರಾಯರ್,
ರೆಜಿಸ್ಟ್ರಾರ್.

ಫೈನ್ಯಾನ್ಷಿಯಲ್ ಇಲಾಖೆ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಗೆ, ಷರಾ ಬರೆಯಲ್ಪಡಬಹುದಾದಂಥಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡನ್‌ನಲ್ಲಿ, ಸ್ಟ್ರಾಂಡ್ ಬೀದಿ 59ನೇ ನಂಬರ್ ಕಟ್ಟಿದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್‌ಕೋಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಗೆ ಅವರುಗಳೊಡನೆ ಮೈಸೂರು ಗವರ್ಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್‌ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡಿಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಕ್ಸ್‌ಚೇಂಜ್‌ಮೆಂಟ್ ಯಾನೇ ಷರಾ ಬಗ್ಗೆ ಇದರಡಿ ರುಜೂ ಮಾಡಿರುವವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡಿಯು, ಮದ್ರಾಸಿನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ರಾಫ್ಟಿಕೇಟಾದ ಡಿಮಾಂಡ್ ಡ್ರಾಫ್ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಕ್ಸ್‌ಚೇಂಜ್‌ಮೆಂಟ್ ಬಗ್ಗೆ ಫೀ ಯೇನೂ ಚಾರ್ಜ್ ಮಾಡಲ್ಪಡಬಾರದು.

ಹೆಚ್. ಹಡ್ಸನ್,
ಕಾಂಪ್ಟ್ರೋಲರ್.